# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ಹಿರಿಯೂರು.

## ಸಿ.ಸಿ ಸಂಖ್ಯೆ: 715/2023

| | | | |
|---|---|---|---|
| ಸಾಕ್ಷಿದಾರರ ಹೆಸರು | - | ರಾಜು. ಹೆಚ್.ಎಂ. | ಸಿಡಬ್ಲ್ಯೂ-12 |
| ತಂದೆಯ/ಗಂಡನ ಹೆಸರು | - | ಮರಡಪ್ಪ | ಪಿಡಬ್ಲ್ಯೂ-11 |
| ವಯಸ್ಸು | - | 52 ವರ್ಷ | ಪ್ರ.ವ.ಬೋ<br>ದಿನಾಂಕ:19.12.2025 |
| ಉದ್ಯೋಗ | - | ಸಹಾಯಕ ಉಪ ನಿರೀಕ್ಷಕರು,<br>ಅಬ್ಬಿನಹೊಳೆ ಪೊಲೀಸ್ ಠಾಣೆ | |
| ವಾಸ | - | ಅಬ್ಬಿನಹೊಳೆ | |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿ ಯವರಿಂದ:-**

1. ನಾನು 2019 ರಿಂದ ಇಲ್ಲಿಯವರೆಗೆ ಅಬ್ಬಿನಹೊಳೆ ಪೊಲೀಸ್ ಠಾಣೆಯಲ್ಲಿ, ಸಹಾಯಕ ಉಪನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿನಾಂಕ:12.02.2023 ರಂದು ನಾನು ಪೊಲೀಸ್ ಠಾಣೆ ಪ್ರಭಾರದಲ್ಲಿದ್ದಾಗ ಸಂಜೆ 3.00 ಗಂಟೆ ಸಮಯದಲ್ಲಿ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಿಂದ ಹಲ್ಲೆ ಪ್ರಕರಣದಲ್ಲಿ ಗಾಯಾಳುಗಳು ದಾಖಲಾಗಿರುತ್ತಾರೆ ಎಂದು ಮಾಹಿತಿ ಬಂದಿರುತ್ತದೆ. ಅದರಂತೆ ನಾನು ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗಕ್ಕೆ ತೆರಳಿ ಸೂಚನಾ ಪತ್ರ ಸ್ವೀಕರಿಸಿ ಗಾಯಾಳು ಚಾಸಾ-1 ರವರನ್ನು ವಿಚಾರಣೆ ಮಾಡಿ ನಿಪಿ-1 ರಂತೆ ಹೇಳಿಕೆ ಪಡೆದುಕೊಂಡು ಸಂಜೆ 4.30 ಗಂಟೆಗೆ ಠಾಣೆಗೆ ಮರಳಿ ಬಂದು ನಿಪಿ-1 ಹೇಳಿಕೆ ದೂರಿನ ಆಧಾರದ ಮೇಲೆ ಠಾಣಾ ಮೊಕದ್ದಮೆ ಸಂಖ್ಯೆ:24/2023 ರಂತೆ ಪ್ರಕರಣ ದಾಖಲು ಮಾಡಿಕೊಂಡಿರುತ್ತೇನೆ. ನಿಪಿ-1 ರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿ ನೋಡಿ ಗುರುತಿಸಿದ ಆಸ್ಪತ್ರೆಯ ಸೂಚನಾ ಪತ್ರವನ್ನು **ನಿಪಿ-11** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-11(ಎ)** ಎಂದು ಗುರುತಿಸಲಾಯಿತು. ಸಾಕ್ಷಿ ನೋಡಿ ಗುರುತಿಸಿದ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ಘನ

ನ್ಯಾಯಾಲಯಕ್ಕೂ ಮತ್ತು ನಮ್ಮ ಇಲಾಖಾ ಮೇಲಾಧಿಕಾರಿಗಳಿಗೂ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಗೆ ಪ್ರಥಮ ವರ್ತಮಾನ ವರದಿಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ **ನಿಪಿ-12** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-12(ಎ)** ಎಂದು ಗುರುತಿಸಲಾಯಿತು.

3. ದಿನಾಂಕಃ12.02.2023 ರಂದು ಸಂಜೆ 4.30 ಗಂಟೆಗೆ ಕೃತ್ಯ ನಡೆದ ಸ್ಥಳವಾದ ಹಿರಿಯೂರು ತಾಲೂಕು ಶಿವಗಂಗ ಗ್ರಾಮದ ಕರೆಪಾತಣ್ಣನವರ ಮನೆಯ ಮುಂದೆ ಚಾಸಾ-6 ರವರು ತೋರಿಸಿದ ಸ್ಥಳದಲ್ಲಿ ಘಟನಾ ಸ್ಥಳಕ್ಕೆ ಪಂಚರಾದ ಚಾಸಾ-7 ಮತ್ತು 8 ರವರನ್ನು ಬರಮಾಡಿಕೊಂಡು ಅವರಿಗೆ ಪಂಚನಾಮೆಗೆ ಸಹಕರಿಸುವಂತೆ ಕೋರಿ ನೋಟೀಸ್ ನೀಡಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ನೋಟೀಸ್‌ನ್ನು **ನಿಪಿ-13** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-13(ಎ)** ಎಂದು ಗುರುತಿಸಲಾಯಿತು. ನಂತರ ಚಾಸಾ-6 ರವರು ತೋರಿಸಿಕೊಟ್ಟಂತೆ ಪಂಚರ ಸಮಕ್ಷಮ ನಿಪಿ-7 ರಂತೆ ಸ್ಥಳ ಪಂಚನಾಮೆಯನ್ನು ತಯಾರಿಸಿರುತ್ತೇನೆ. ನಿಪಿ-7 ರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-7(ಸಿ)** ಎಂದು ಗುರುತಿಸಲಾಯಿತು. ಪಂಚನಾಮೆ ಕಾಲಕ್ಕೆ ಚಾಸಾ-6 ರವರು ಹಾಜರುಪಡಿಸಿದ ಸುಮಾರು 3 ಅಡಿ ಉದ್ದದ ಹಾರೆ ಕೋಲನ್ನು ವಶಪಡಿಸಿಕೊಂಡಿರುತ್ತೇನೆ. ನಂತರ ಠಾಣೆಗೆ ಬಂದು ವಶಪಡಿಸಿಕೊಂಡ ಮುದ್ದೆ ಮಾಲುಗಳನ್ನು ಠಾಣಾ ಮಾಲುಪಟ್ಟಿ ಸಂಖ್ಯೆ:12/2023 ರಲ್ಲಿ ನಮೂದಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಠಾಣಾ ಮಾಲುಪಟ್ಟಿಯನ್ನು **ನಿಪಿ-14** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-14(ಎ)** ಎಂದು ಗುರುತಿಸಲಾಯಿತು. ಸಾಕ್ಷಿ ನೋಡಿ ಗುರುತಿಸಿದ ಹಾರೆ ಕೋಲನ್ನು **ಮು.ಮಾ-3** ಎಂದು ಗುರುತಿಸಲಾಯಿತು.

4. ದಿನಾಂಕಃ14.02.2023 ರಂದು ಚಾಸಾ-2 ರವರು ಠಾಣೆಗೆ ಬಂದು ಮು.ಮಾ-1 ಮತ್ತು 2 ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಚಾಸಾ-9 ಮತ್ತು 10 ರವರ ಸಮಕ್ಷಮ ನಿಪಿ-2 ರಂತೆ ಅಮಾನತ್ತು ಪಂಚನಾಮೆ ಜರುಗಿಸಿ ವಶಪಡಿಸಿಕೊಂಡಿರುತ್ತೇನೆ. ಪಂಚನಾಮೆ ಕಾಲಕ್ಕೆ ಪಂಚರಿಗೆ ನಿಪಿ-10 ರಂತೆ ನೋಟೀಸ್ ನೀಡಿರುತ್ತೇನೆ. ನಿಪಿ-10 ರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-10(ಬಿ)** ಎಂದು

ಗುರುತಿಸಲಾಯಿತು. ನಂತರ ಠಾಣೆಗೆ ಬಂದು ವಶಪಡಿಸಿಕೊಂಡ ಮುದ್ದೆ ಮಾಲನ್ನು ಠಾಣಾ ಮಾಲುಪಟ್ಟಿ ಸಂಖ್ಯೆ:14/2023 ರಲ್ಲಿ ನಮೂದಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಠಾಣಾ ಮಾಲುಪಟ್ಟಿಯನ್ನು **ನಿಪಿ-15** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-15(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು.ಮಾ-1 ಮತ್ತು 2 ಗಳನ್ನು ನೋಡಿ ಗುರುತಿಸುತ್ತಾರೆ. ಅದೇ ದಿನ ಚಾಸಾ-2 ರಿಂದ 6 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

5. ದಿನಾಂಕ:29.03.2023 ರಂದು ಚಾಸಾ-2 ಮತ್ತು 3 ರವರನ್ನು ಮಾನ್ಯ ನ್ಯಾಯಾಲಯದಲ್ಲಿ ದ.ಪ್ರ.ಸಂ ಕಲಂ:164(5) ರಡಿಯಲ್ಲಿ ಹೇಳಿಕೆ ಪಡೆಯುವಂತೆ ಕೋರಿ ಮನವಿ ಪತ್ರ ಸಲ್ಲಿಸಿಕೊಂಡಿರುತ್ತೇನೆ.

6. ದಿನಾಂಕ:21.02.2023 ರಂದು ಆರೋಪಿತರು ಠಾಣೆಗೆ ಹಾಜರಾಗಿದ್ದು ಮಾನ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದುಕೊಂಡು ಬಂದು ಹಾಜರುಪಡಿಸಿದ್ದು ಅದನ್ನು ಸ್ವೀಕರಿಸಿಕೊಂಡು ಆರೋಪಿತರ ವಿರುದ್ಧ ದಸ್ತಗಿರಿ ನಿಯಮ ಪಾಲಿಸಿ ದಸ್ತಗಿರಿ ಮಾಡಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ಅವರು ಈ ದಿನ ನ್ಯಾಯಾಲಯದ ಮುಂದಿರುವ ಆರೋಪಿತರಾಗಿರುತ್ತಾರೆ. (ಈ ದಿನ 3 ನೇ ಆರೋಪಿಯು ನ್ಯಾಯಾಲಯದ ಮುಂದೆ ಗೈರು ಹಾಜರು ಉಳಿದಿದ್ದು ಆರೋಪಿ ಪರ ವಕೀಲರು 3 ನೇ ಆರೋಪಿಯ ಗುರುತಿಸುವಿಕೆಗೆ ತಕರಾರು ಇಲ್ಲ ಎಂದು ತಿಳಿಸಿ 3 ನೇ ಆರೋಪಿ ಪರ ವಿನಾಯಿತಿ ಅರ್ಜಿ ಸಲ್ಲಿಸಿರುತ್ತಾರೆ.)

7. ದಿನಾಂಕ:11.03.2023 ರಂದು ಚಾಸಾ-1 ರಿಂದ 4 ರವರ ಗಾಯದ ಪ್ರಮಾಣ ಪತ್ರಗಳನ್ನು ಚಾಸಾ-11 ರವರಿಂದ ಪಡೆದಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಗಾಯದ ಪ್ರಮಾಣ ಪತ್ರಗಳನ್ನು ಕ್ರಮವಾಗಿ **ನಿಪಿ-16 ರಿಂದ 19** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-16(ಎ) ರಿಂದ 19(ಎ)** ಎಂದು ಗುರುತಿಸಲಾಯಿತು. ನಂತರ ಪ್ರಕರಣದಲ್ಲಿ ತನಿಖೆ ಮುಕ್ತಾಯಗೊಂಡಿದ್ದು

ಮೇಲ್ನೋಟಕ್ಕೆ ಆರೋಪಿತರ ವಿರುದ್ಧ ದೋಷಾರೋಪ ಸಿದ್ಧವಾಗಿದ್ದರಿಂದ ಮಾನ್ಯ ನ್ಯಾಯಾಲಯಕ್ಕೆ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ.

**ಪಾಟೀ–ಸವಾಲುಃ ಆರೋಪಿತರ ಪರ ಶ್ರೀ ಎಸ್.ಟಿ.ಎಸ್. ವಕೀಲರಿಂದಃ–**

8. ನಾನು ದಿನಾಂಕಃ12.02.2023 ರಂದು ಚಾಸಾ–2 ರವರಿಂದ ಯಾವುದೇ ಹೇಳಿಕೆ ದೂರನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಪಂಚರಾದ ಚಾಸಾ–6 ಮತ್ತು 7, 9 ಮತ್ತು 10 ರವರ ಸಮಕ್ಷಮ ಯಾವುದೇ ಸ್ಥಳ ಮತ್ತು ಅಮಾನತ್ತು ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ–2 ರಿಂದ 6 ರವರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಯಾವುದೇ ಗಾಯದ ಪ್ರಮಾಣ ಪತ್ರಗಳನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ.

9. ನಾನು ಹೇಳುವಂತೆ ಆಸ್ಪತ್ರೆಗೆ ಹೋಗಿಲ್ಲ ಮತ್ತು ಚಾಸಾ–1 ರವರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಚಾಸಾ–1 ರವರ ಮಾತು ಕೇಳಿ ಆರೋಪಿತರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ದೋಷಾರೋಪಣೆ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಸಿ/ಸಿ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಹಿರಿಯೂರು.